# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **1635** |
| **ಮಾನ್ಯ ಸದಸ್ಯರ ಹೆಸರು** | ಶ್ರೀ ಐವನ್ ಡಿ'ಸೋಜ (ವಿಧಾನಸಭಾ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | 18.03.2026 |
| **ಉತ್ತರಿಸುವ ಸಚಿವರು** | ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ದಕ್ಷಿಣ ಕನ್ನಡ ಜಿಲ್ಲೆಗೆ ಮಂಜೂರಾಗಿರುವ ಪಶುವೈದ್ಯಾಧಿಕಾರಿಗಳ ಒಟ್ಟು ಹುದ್ದೆ ಎಷ್ಟು; | ದಕ್ಷಿಣ ಕನ್ನಡ ಜಿಲ್ಲೆಗೆ ಒಟ್ಟು **74** ಪಶುವೈದ್ಯರ ಹುದ್ದೆಗಳು ಮಂಜೂರಾಗಿರುತ್ತದೆ. |
| ಆ | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಮಯಕ್ಕೆ ಸರಿಯಾಗಿ ಪಶುವೈದ್ಯಕೀಯ ಸೇವೆಗಳು ದೊರೆಯುವುದಿಲ್ಲ ಎಂಬ ದೂರುಗಳಿರುವುದು ನಿಜವೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಖಾಲಿ ಇರುವ ಪಶುವೈದ್ಯರು ಹಾಗೂ ಸಹಾಯಕ ಸಿಬ್ಬಂದಿಗಳ ಹುದ್ದೆಗಳಿಗೆ ಹತ್ತಿರದಲ್ಲಿರುವ ಪಶುವೈದ್ಯಕೀಯ ಸಂಸ್ಥೆಗಳಲ್ಲಿನ ಪಶುವೈದ್ಯರು ಹಾಗೂ ಸಹಾಯಕ ಸಿಬ್ಬಂದಿಗಳನ್ನು ಅಧಿಕ ಪ್ರಭಾರ ವ್ಯವಸ್ಥೆ ಮಾಡಲಾಗಿರುತ್ತದೆ ಮತ್ತು ಪಶು ಸಂಜೀವಿನಿ ಯೋಜನೆಯಡಿ ಸಂಚಾರಿ ಪಶು ಚಿಕಿತ್ಸಾಲಯ ವಾಹನದಲ್ಲಿ ರೈತರ ಮನೆ ಬಾಗಿಲಿಗೆ ತೆರಳಿ ಯಾವುದೇ ವ್ಯತ್ಯಯವಾಗದಂತೆ ಪಶುವೈದ್ಯಕೀಯ ಸೇವೆಗಳನ್ನು ಒದಗಿಸಲಾಗುತ್ತಿದೆ. |
| ಇ | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಜೂರಾಗಿರುವ ಪಶುವೈದ್ಯಾಧಿಕಾರಿಗಳ ಹುದ್ದೆಯಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು? ಯಾವಾಗ ಭರ್ತಿ ಮಾಡಲಾಗುವುದು? (ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಪಶುವೈದ್ಯರ ಹುದ್ದೆಗಳ ವಿವರಗಳು ಈ ಕೆಳಕಂಡಂತೆ ಇರುತ್ತದೆ.<br>**ಮಂಜೂರು** \| **ಭರ್ತಿ** \| **ಗುತ್ತಿಗೆ** \| **ಒಟ್ಟು ಖಾಲಿ**<br>**74** \| **27** \| **4** \| **43**<br><br>**400** ಪಶುವೈದ್ಯಾಧಿಕಾರಿಗಳ ಖಾಯಂ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಿಂದ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br><br>ಹೆಚ್ಚುವರಿಯಾಗಿ **400** ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅನುಮತಿಗಾಗಿ ಕೋರಿದ್ದು, ಆರ್ಥಿಕ ಇಲಾಖೆಯ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |

**(ಸಂಖ್ಯೆ: AHF/69/AID/2026)**

**(ಕೆ.ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವರು.